ಅ) ಈಗಾಗಲೇ ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಮಂಡಳಿಯು ಮೈಸೂರು ನಗರದ ಬಳಿ ಸುಮಾರು 3500-00 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಂಡು, ಹೆಬ್ಬಾಳು, ಮೇಟಗಳ್ಳಿ, ಹೂಟಗಳ್ಳಿ, ಬೆಳಗೊಳ ಇತ್ಯಾದಿ ಪ್ರದೇಶಗಳಲ್ಲಿ ಕೈಗಾರಿಕಾ ವಲಯಗಳನ್ನು ಕೈಗಾರಿಕಾ ಅಭಿವೃದ್ಧಿಗೆ ಬೇಕಾಗುವ ಮೂಲಭೂತ ಸೌಕರ್ಯಗಳೊಂದಿಗೆ ಸ್ಥಾಪಿಸಿದೆ.

ರಾಜ್ಯದಲ್ಲಿ ಹೊಸ ಸಕ್ಕರೆ ಕಾರ್ಖಾನೆಗಳ ಸ್ಥಾಪನೆ

155 - ಶ್ರೀ ಕೆ.ಎಸ್. ನಾಗೇಗೌಡ (ಕಿರುಗಾವಲು) : ಮಾನ್ಯ ಸಕ್ಕರೆ, ಜವಳಿ, ವಿಜ್ಞಾನ, ತಂತ್ರಜ್ಞಾನ, ಪರಿಸರ, ಮತ್ತು ಜೀವಿ ಪರಿಸ್ಥಿತಿ ಶಾಸ್ತ್ರ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಈ ಸಾಲಿಗೆ ಎಷ್ಟು ಸಕ್ಕರೆ ಕಾರ್ಖಾನೆಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರದವರು ಶಿಫಾರಸ್ಸು ಮಾಡಿರುವರು?*

ಆ) *ಈ ಪೈಕಿ ಕರ್ನಾಟಕ ರಾಜ್ಯದವರು ಎಷ್ಟು ಜನ ಹಾಗೂ ಇತರ ರಾಜ್ಯಕ್ಕೆ ಸೇರಿದವರು ಎಷ್ಟು ಜನ?*

ಶ್ರೀ ಪಿ.ಸಿ. ಸಿದ್ದನಗೌಡರ್ (ಸಕ್ಕರೆ, ಜವಳಿ, ವಿಜ್ಞಾನ, ತಂತ್ರಜ್ಞಾನ, ಪರಿಸರ, ಮತ್ತು ಜೀವ ಪರಿಸ್ಥಿತಿ ಶಾಸ್ತ್ರ ರಾಜ್ಯ ಸಚಿವರು) :

ಅ) 11 (ಹನ್ನೊಂದು) ಹೊಸ ಸಕ್ಕರೆ ಕಾರ್ಖಾನೆಗಳು

ಆ) ಹೊರ ರಾಜ್ಯಕ್ಕೆ ಸೇರಿದವರು ಯಾರು ಇರುವುದಿಲ್ಲ

ಬೆಂಗಳೂರು ರಾಜಾಜಿನಗರದ ಕೈಗಾರಿಕಾ ವಸಹಾತುವಿನ ಬಗ್ಗೆ

156 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರು ರಾಜಾಜಿನಗರದ ಕೈಗಾರಿಕಾ ವಸಾಹತುವಿನಲ್ಲಿರುವ ಎ-88 ಮಳಿಗೆಯನ್ನು ಯಾರು ಯಾರಿಗೆ ಮಂಜೂರಾಗಿರುತ್ತದೆ. ಮತ್ತು ಮಾರಾಟವಾಗಿದೆಯೇ (ವಿವರಗಳನ್ನೊದಗಿಸುವುದು)*

ಆ) *ಮಾರಾಟದ ಬೆಲೆ ಎಷ್ಟು?*

ಇ) *ಕೈಗಾರಿಕೆಯವರಿಂದ ಪಡೆದ ಹಣವೆಷ್ಟು ಇಂದಿನ ಮಾರುಕಟ್ಟೆಯ ಬೆಲೆಗೆ ಅನುಗುಣವಾಗಿದೆಯೇ?*

ಶ್ರೀ ಎನ್.ಎಂ. ನಬೀ (ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು) :

ಅ) ಬೆಂಗಳೂರು ರಾಜಾಜಿನಗರ ಕೈಗಾರಿಕಾ ವಸಾಹತುವಿನಲ್ಲಿ ಎ-88 ಸಂಖ್ಯೆಯ ಮಳಿಗೆಯು ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಕುಂದಾಪುರದಲ್ಲಿ ಮಹಿಳೆಯರ ಪದವಿಪೂರ್ವ ವಿದ್ಯಾರ್ಥಿನಿಯರ ವಿದ್ಯಾರ್ಥಿನಿಲಯ

158 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲ್ಲೂಕು ಕೇಂದ್ರದಲ್ಲಿ ಮಹಿಳೆಯರ ಪದವಿಪೂರ್ವ ವಿದ್ಯಾರ್ಥಿನೀಯರ ವಿದ್ಯಾರ್ಥಿನಿಲಯ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುವ ಯೋಜನೆ ಸರ್ಕಾರದ ಮುಂದಿದೆಯೇ?

ಆ) ಈ ವಿಷಯದಲ್ಲಿ ಬಹಳಷ್ಟು ಮನವಿಗಳು ಸರ್ಕಾರಕ್ಕೆ ಬಂದಿರುವುದು ನಿಜವೇ? ಹಾಗಿದ್ದಲ್ಲಿ, ಈ ವಿಷಯದಲ್ಲಿ ವಿಳಂಬವಾಗಲು ಕಾರಣವೇನು?

ಶ್ರೀ ರಮೇಶ್ ಸಿ. ಜಿಗಜಿಣಗಿ (ಸಮಾಜ ಕಲ್ಯಾಣ ಸಚಿವರು) :

ಅ) ಇಲ್ಲ.

ಆ) ಜಿಲ್ಲಾ ಪಂಚಾಯತನವತಿಯಿಂದ ವಿದ್ಯಾರ್ಥಿನಿಲಯ ಪ್ರಾರಂಭಿಸಲು ಪ್ರಸ್ತಾವನೆ ಬಂದಿರುತ್ತದೆ. ಆದರೆ ಪದವಿಪೂರ್ವ ವಿದ್ಯಾರ್ಥಿನಿಲಯ ಪ್ರಾರಂಭಿಸಲು ಕನಿಷ್ಠ 50 ಸಂಖ್ಯೆಯ ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿದ್ಯಾರ್ಥಿನೀಯರು ಇಲ್ಲದೆ ಇರುವ ಕಾರಣ ವಿದ್ಯಾರ್ಥಿನಿಲಯವನ್ನು ಮಂಜೂರು ಮಾಡಿರುವುದಿಲ್ಲ.

ರಾಜ್ಯದಲ್ಲಿ ಬೃಹತ್ ಕೈಗಾರಿಕೆಗಳಿಗೆ ಅನುಮತಿ

161 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಯಾವ ಯಾವ ಹೊಸ ಬೃಹತ್ ಕೈಗಾರಿಕೆಗಳಿಗೆ ಅನುಮತಿ ನೀಡಲಾಗಿದೆ (ಜಿಲ್ಲಾ ಮತ್ತು ತಾಲ್ಲೂಕುವಾರು ವಿವರಗಳನ್ನೊದಗಿಸುವುದು)

ಆ) ಈ ಹೊಸ ಬೃಹತ್ ಕೈಗಾರಿಕೆಗಳಿಗೆ ಸರಕಾರದಿಂದ ಸಿಗುವ ಸೌಲಭ್ಯಗಳೇನು (ವಿವರವನ್ನೊದಗಿಸುವುದು)

ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಾರಂಭವಾಗುವ ಹೊಸ ಕೈಗಾರಿಕೆಗಳಾವುವು?

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು) :

ಅ) 1991ರ ಭಾರತ ಸರ್ಕಾರದ ಹೊಸ ಕೈಗಾರಿಕೆ ನೀತಿಯ ಘೋಷಣೆಯ ನಂತರ 25.7.1991ರಿಂದ 15.7.1995ರವರೆಗೆ ರಾಜ್ಯದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ 37 ಬೃಹತ್